**All India Radio: Bangalore**
**National Bulletin In Kannada**
**20.09.2025  19.35 p.m.**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**20.09.2025  19.35 p.m.**
**<><><><>**

ಮುಖ್ಯಾಂಶಗಳು

1. ಗುಜರಾತ್‌ನ ಭಾವನಗರದಲ್ಲಿ ೪೦ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಯೋಜನೆಗಳಿಗೆ ಪ್ರಧಾನಿಯವರಿಂದ ಶಿಲಾನ್ಯಾಸ ಮತ್ತು ಚಾಲನೆ
2. ನಾಗರಿಕರ ಅನುಕೂಲಕ್ಕಾಗಿ ಜಿಎಸ್‌ಟಿ ಸ್ಲ್ಯಾಬ್‌ಗಳ ಸುಧಾರಣೆ - ವಿತ್ತಸಚಿವೆ ನಿರ್ಮಲಾ ಸೀತಾರಾಮನ್
3. ಹಿಂದೂ ಮಹಾಸಾಗರದಲ್ಲಿ ಸಂಶೋಧನೆಗೆ ಕೇಂದ್ರ ಭೂ ವಿಜ್ಞಾನ ಸಚಿವಾಲಯ ಅಂತಾರಾಷ್ಟ್ರೀಯ ಆಳಸಮುದ್ರ ಪ್ರಾಧಿಕಾರದೊಡನೆ ಒಪ್ಪಂದ
4. ಬ್ಯಾಡ್ಮಿಂಟನ್ ಚೀನಾ ಮಾಸ್ಟರ್ಸ್ ೨೦೨೫ : ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ-ಚಿರಾಗ್ ಶೆಟ್ಟಿ ಪುರುಷರ ಡಬಲ್ಸ್ ಫೈನಲ್‌ಗೆ ಲಗ್ಗೆ

<><><><>

೨೦೪೭ ರ ವೇಳೆಗೆ ಅಭಿವೃದ್ಧಿ ಹೊಂದಿದ ಭಾರತದ ದೃಷ್ಟಿಕೋನವನ್ನು ಸಾಕಾರಗೊಳಿಸಲು ಭಾರತವು ಸ್ವಾವಲಂಬಿ ರಾಷ್ಟ್ರವಾಗಿ ಪ್ರಪಂಚದ ಮುಂದೆ ನಿಲ್ಲುವ ಸಮಯ ಬಂದಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಗುಜರಾತ್‌ನ ಭಾವನಗರದಲ್ಲಿ ಇಂದು 'ಸಮುದ್ರ ಸೇ ಸಮೃದ್ಧಿ' ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು, ಭಾರತವನ್ನು ಸಮುದ್ರ ಮಹಾಶಕ್ತಿಯನ್ನಾಗಿ ಮಾಡುವುದು ಸರ್ಕಾರದ ಧ್ಯೇಯವಾಗಿದ್ದು, ೨೦೪೭ರ ವೇಳೆಗೆ ಜಾಗತಿಕ ಸಮುದ್ರ ವ್ಯಾಪಾರದಲ್ಲಿ ದೇಶವು ತನ್ನ ಪಾಲನ್ನು ಮೂರು ಪಟ್ಟು ಹೆಚ್ಚಿಸುವ ಗುರಿಯನ್ನು ಹೊಂದಿದೆ ಎಂದು ಹೇಳಿದ್ದಾರೆ.

**ಧ್ವನಿ : ಪ್ರಧಾನಿ-ಗುಜರಾತ್ (೩೧ ಸೆಕೆಂಡ್‌ಗಳು)**

೩೨ ಸಾವಿರ ಕೋಟಿ ರೂಪಾಯಿಗಳಿಗಿಂತ ಹೆಚ್ಚು ಮೌಲ್ಯದ ಬಹು ಯೋಜನೆಗಳನ್ನು ಪ್ರಧಾನಿ ನರೇಂದ್ರ ಮೋದಿಯವರು ಉದ್ಘಾಟಿಸಿ, ಶಂಕುಸ್ಥಾಪನೆ ನೆರವೇರಿಸಿದರು. ಬಳಿಕ ಅವರು, ೭ ಸಾವಿರದ ೮೦೦ ಕೋಟಿ ರೂಪಾಯಿಗಳಿಗಿಂತ ಹೆಚ್ಚು ಮೌಲ್ಯದ ಹಲವಾರು ಪ್ರಮುಖ ಸಮುದ್ರ ಯೋಜನೆಗಳು ಹಾಗೂ ಮುಂಬೈ ಅಂತಾರಾಷ್ಟ್ರೀಯ ಕ್ರೂಸ್ ಟರ್ಮಿನಲ್ ಉದ್ಘಾಟಿಸಿದರು. ಭಾರತದ ಐತಿಹಾಸಿಕ ಕಡಲ ಬಲವನ್ನು ಪುನರುಚ್ಚರಿಸಿದ ಪ್ರಧಾನಿ, ವಿಶ್ವದ ಕಡಲ ವ್ಯಾಪಾರದ ಶೇಕಡಾ ೪೦ ರಿಂದ ೫೦ ರಷ್ಟು ಭಾರತದಲ್ಲಿ ನಿರ್ಮಿಸಲಾದ ಹಡಗುಗಳ ಮೂಲಕ ನಡೆಯುತ್ತಿದ್ದ ಕಾಲವಿತ್ತು ಎಂದು ಹೇಳಿದರು. ದೇಶವು ಈಗ ತನ್ನ ಪರಂಪರೆಯನ್ನು ಮರಳಿ ಪಡೆಯಲು ಮತ್ತು ಜಾಗತಿಕ ಕಡಲ ಶಕ್ತಿಯಾಗಿ ಹೊರಹೊಮ್ಮಲು ತೀವ್ರವಾಗಿ ಕೆಲಸ ಮಾಡುತ್ತಿದೆ ಎಂದು ಅವರು ಹೇಳಿದರು. ಭಾರತದ ಕಡಲ ವಲಯವು ಮುಂದಿನ ಪೀಳಿಗೆಯ ಸುಧಾರಣೆಯಾಗುತ್ತಿದೆ. ದೇಶಾದ್ಯಂತ ಬಂದರು ಕಾರ್ಯವಿಧಾನಗಳನ್ನು ಸರಳಗೊಳಿಸುವ ಗುರಿಯನ್ನು

ಹೊಂದಿರುವ ಈ ವಲಯವು ಶೀಘ್ರದಲ್ಲೇ "ಒಂದು ರಾಷ್ಟ್ರ, ಒಂದು ಬಂದರು ಕಾರ್ಯವಿಧಾನ"ವನ್ನು ಅಳವಡಿಸಿಕೊಳ್ಳಲಿದೆ ಎಂದು ಪ್ರಧಾನಿ ಘೋಷಿಸಿದರು. ಇತ್ತೀಚೆಗೆ ಸಂಸತ್ತಿನಲ್ಲಿ ಐದು ಸಮುದ್ರ ಸಂಬಂಧಿತ ಮಸೂದೆಗಳನ್ನು ಅಂಗೀಕರಿಸುವುದನ್ನು ಬಂದರು ಆಡಳಿತವನ್ನು ಆಧುನೀಕರಿಸುವ "ಗೇಮ್ ಚೇಂಜರ್" ಎಂದು ಅವರು ಬಣ್ಣಿಸಿದರು. ಸ್ಥಳೀಯ ಹಡಗು ನಿರ್ಮಾಣದಲ್ಲಿ ಭಾರತದ ಸಾಮರ್ಥ್ಯಗಳನ್ನು ಉಲ್ಲೇಖಿಸಿದ ಪ್ರಧಾನಿ ಐಎನ್‌ಎಸ್ ವಿಕ್ರಾಂತ್‌ನ ಉದಾಹರಣೆಯನ್ನು ನೀಡಿದರು. ಹೊಸ ಬಂದರುಗಳ ಅಭಿವೃದ್ಧಿ, ಅಸ್ತಿತ್ವದಲ್ಲಿರುವ ಮೂಲಸೌಕರ್ಯಗಳ ವಿಸ್ತರಣೆ ಮತ್ತು ಕ್ರೂಸ್ ಪ್ರವಾಸೋದ್ಯಮದ ಪ್ರಚಾರ ಸೇರಿದಂತೆ ಕಡಲ ಆರ್ಥಿಕತೆಯನ್ನು ಹೆಚ್ಚಿಸಲು ಸರ್ಕಾರ ತೆಗೆದುಕೊಂಡ ವಿವಿಧ ಉಪಕ್ರಮಗಳ ಬಗ್ಗೆಯೂ ಅವರು ಮಾತನಾಡಿದರು. ದೇಶದ ಪ್ರಾಚೀನ ಕಡಲ ಸಂಪ್ರದಾಯಗಳನ್ನು ಪ್ರದರ್ಶಿಸಲು ಮತ್ತು ಭವಿಷ್ಯದ ಪೀಳಿಗೆಗೆ ಅವುಗಳನ್ನು ಸಂರಕ್ಷಿಸಲು ಸರ್ಕಾರ ಲೋಥಾಲ್‌ನಲ್ಲಿ ರಾಷ್ಟ್ರೀಯ ಕಡಲ ಪರಂಪರೆಯ ವಸ್ತುಸಂಗ್ರಹಾಲಯವನ್ನು ಸ್ಥಾಪಿಸುತ್ತಿದೆ ಎಂದು ಹೇಳಿದರು.

<><><><>

ದೇಶದ ನಾಗರಿಕರ ಅನುಕೂಲಕ್ಕಾಗಿ ಜಿಎಸ್‌ಟಿ ಸ್ಲ್ಯಾಬ್‌ಗಳನ್ನು ಸುಧಾರಿಸಲಾಗಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಇಂದು ತುತುಕುಡಿಯ ಕೋವಿಲ್‌ಪಟ್ಟಿಯಲ್ಲಿ ನಡೆದ ಬೆಂಕಿಕಡ್ಡಿ ಮತ್ತು ಪಟಾಕಿ ಉತ್ಪಾದನಾ ಸಂಘಗಳ ಶತಮಾನೋತ್ಸವ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ೨೦೪೭ ರಲ್ಲಿ ಸರ್ಕಾರವು ವಿಕಸಿತ ಭಾರತದ ದೀರ್ಘಾವಧಿಯ ದೂರದೃಷ್ಟಿಯೊಂದಿಗೆ ಕಾರ್ಯನಿರ್ವಹಿಸುತ್ತಿದೆ. ಪಟಾಕಿ ಮತ್ತು ಬೆಂಕಿಕಡ್ಡಿ ತಯಾರಕರ ಅನುಕೂಲಕ್ಕಾಗಿ ಸರ್ಕಾರವು ಎಲ್ಲಾ ಸಹಾಯವನ್ನು ನೀಡುತ್ತದೆ ಎಂದು ಅವರು ತಿಳಿಸಿದರು. ಈ ತಿಂಗಳ ೨೨ ರಿಂದ ಜಿಎಸ್‌ಟಿ ಕಡಿತದಿಂದಾಗಿ ಜನರು ಕಡಿಮೆ ಬೆಲೆಗೆ ವಸ್ತುಗಳನ್ನು ಖರೀದಿಸಬಹುದು. ಹಬ್ಬಗಳನ್ನು ಆಚರಿಸಲು ಜನರಿಗೆ ಸಹಾಯ ಮಾಡುವ ೩೭೫ ಸರಕುಗಳಿಗೆ ಜಿಎಸ್‌ಟಿ ದರಗಳನ್ನು ಕಡಿಮೆ ಮಾಡಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

<><><><>

ಹಿಂದೂ ಮಹಾಸಾಗರದ ಕಾರ್ಲ್ಸ್‌ಬರ್ಗ್ ರಿಡ್ಜ್‌ನಲ್ಲಿ ಪಾಲಿಮೆಟಾಲಿಕ್ ಸಲ್ಫೈಡ್ ಪಿಎಂಎಸ್‌ಗಳನ್ನು ಅನ್ವೇಷಿಸಲು ವಿಶೇಷ ಹಕ್ಕುಗಳಿಗಾಗಿ ಭೂ ವಿಜ್ಞಾನ ಸಚಿವಾಲಯ ಮತ್ತು ಅಂತಾರಾಷ್ಟ್ರೀಯ ಆಳಸಮುದ್ರ ಪ್ರಾಧಿಕಾರ ಐಎಸ್‌ಎ ನಡುವೆ ೧೫ ವರ್ಷಗಳ ಹೊಸ ಒಪ್ಪಂದಕ್ಕೆ ಸಹಿ ಹಾಕಲಾಗಿರುವ ಕುರಿತು ಕೇಂದ್ರ ಭೂ ವಿಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ಘೋಷಿಸಿದ್ದಾರೆ. ಪ್ರಸ್ತುತ ಭಾರತಕ್ಕೆ ಭೇಟಿ ನೀಡಿರುವ ಅಂತಾರಾಷ್ಟ್ರೀಯ ಆಳಸಮುದ್ರ ಪ್ರಾಧಿಕಾರದ ಪ್ರಧಾನ ಕಾರ್ಯದರ್ಶಿ ಲೆಟಿಸಿಯಾ ರೀಸ್-ಡಿ-ಕಾರ್ವಾಲ್ಹೋ ಅವರ ಸಮ್ಮುಖದಲ್ಲಿ ಈ ಒಪ್ಪಂದಕ್ಕೆ ಸಹಿ ಹಾಕಲಾಯಿತು. ಈ ಒಪ್ಪಂದ ಸಮುದ್ರತಳದ ಖನಿಜ ಪರಿಶೋಧನೆ, ಗಣಿಗಾರಿಕೆ ತಂತ್ರಜ್ಞಾನ ಅಭಿವೃದ್ಧಿ ಮತ್ತು ಭಾರತದ ನೀಲಿ ಆರ್ಥಿಕ ಉಪಕ್ರಮಗಳನ್ನು ಬಲಪಡಿಸುವ ಮೇಲೆ ಕೇಂದ್ರೀಕರಿಸುತ್ತದೆ. ಎರಡು ಪಾಲಿಮೆಟಾಲಿಕ್ ಸಲ್ಫೈಡ್‌ಗಳ ಒಪ್ಪಂದಗಳು ಈಗ ಜಾರಿಯಲ್ಲಿವೆ. ಅಂತಾರಾಷ್ಟ್ರೀಯ ಸಮುದ್ರತಳದಲ್ಲಿ ಇದಕ್ಕಾಗಿ ಹಂಚಿಕೆಯಾದ ಅತಿದೊಡ್ಡ ಪರಿಶೋಧನಾ ಪ್ರದೇಶವನ್ನು ಭಾರತ ಹೊಂದಿದೆ ಎಂದು ಸಚಿವರು ಮಾಹಿತಿ ನೀಡಿದರು.

<><><><>

ನ್ಯಾಯಮಂಡಳಿಗಳು ಸರ್ಕಾರಿ ಅಧಿಕಾರಿಗಳಿಗೆ ನ್ಯಾಯದ ಲಭ್ಯತೆಯನ್ನು ಸುಧಾರಿಸಲು ಮತ್ತು ದಕ್ಷತೆಯನ್ನು ಸುಧಾರಿಸಲು ವಿನ್ಯಾಸಗೊಳಿಸಲಾಗಿದೆ. ನ್ಯಾಯಮಂಡಳಿ ಪ್ರಾರಂಭವಾದಾಗಿನಿಂದ ಕಳೆದ ನಾಲ್ಕು ದಶಕಗಳಲ್ಲಿ ಈ ಗುರಿಯನ್ನು ಸಾಧಿಸಲು ಅವಿಶ್ರಾಂತವಾಗಿ ಶ್ರಮಿಸಿದೆ ಎಂದು ಮುಖ್ಯ ನ್ಯಾಯಮೂರ್ತಿ ಗವಾಯಿ ಹೇಳಿದರು. ಇಂದು ಬೆಳಿಗ್ಗೆ ನವದೆಹಲಿಯಲ್ಲಿ ಕೇಂದ್ರ ಆಡಳಿತ ನ್ಯಾಯಮಂಡಳಿಯ ೧೦ನೇ ಅಖಿಲ ಭಾರತ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಅವರು, ನ್ಯಾಯಮಂಡಳಿಯ ತೀರ್ಪುಗಳಲ್ಲಿ ಹೆಚ್ಚಿನ ಸ್ಥಿರತೆ ಮತ್ತು ಅದರ ಕಾರ್ಯನಿರ್ವಹಣೆಯಲ್ಲಿ ಪಾರದರ್ಶಕತೆಯ ಅಗತ್ಯವನ್ನು ಒತ್ತಿ ಹೇಳಿದರು. ನ್ಯಾಯಮಂಡಳಿಯನ್ನು ಸಂಪರ್ಕಿಸುವ ಪ್ರತಿಯೊಬ್ಬರೂ ಈ ನಿರ್ಧಾರವು ಸಮಂಜಸವಾಗಿದೆ ಎನ್ನುವುದನ್ನು ದೃಢಪಡಿಸಿಕೊಳ್ಳಬೇಕು ಎಂದು ಅವರು ಹೇಳಿದರು. ಸರ್ಕಾರಿ ನೌಕರರಿಗೆ ನ್ಯಾಯವನ್ನು ಸುಲಭಗೊಳಿಸಲು ಮತ್ತು ಹೈಕೋರ್ಟ್‌ಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಕಡಿಮೆ ಮಾಡಲು ಕ್ಯಾಟ್ ಅನ್ನು ಸ್ಥಾಪಿಸಲಾಗಿದೆ ಎಂದು ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದರು. ೧೦ನೇ ಅಖಿಲ ಭಾರತ ಸಮ್ಮೇಳನವು ನ್ಯಾಯಾಂಗ ಮತ್ತು ಆಡಳಿತ ವ್ಯವಸ್ಥೆಯನ್ನು ಬಲಪಡಿಸುವ ಮುಂದಿನ ಮಾರ್ಗದ ಕುರಿತು ಚರ್ಚಿಸುವ ಗುರಿಯನ್ನು ಹೊಂದಿದೆ.

<><><><>

ಸೇವೆ ಮತ್ತು ಸುಶಾಸನ, ಅಂದರೆ ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಮಂತ್ರದಿಂದ ಮಾರ್ಗದರ್ಶಿಸಲ್ಪಟ್ಟ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಸರ್ಕಾರವು ಪರಿವರ್ತನೆ ಮತ್ತು ಪ್ರಗತಿಯನ್ನು ತರಲು ಅವಿಶ್ರಾಂತವಾಗಿ ಶ್ರಮಿಸುತ್ತಿದೆ. ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ, ಕೇಂದ್ರೀಕೃತ ಸುಧಾರಣೆಗಳ ಸರಣಿಯು ಕೃಷಿಕನನ್ನು ಅನಿಯಮಿತ ಆದಾಯದಿಂದ ಖಚಿತವಾದ ಸಮೃದ್ಧಿಯತ್ತ ಏರಿಸಿದೆ.

**ಧ್ವನಿ : ಪ್ರಧಾನಿ ನರೇಂದ್ರ ಮೋದಿ (೨೮ ಸೆಕೆಂಡ್‌ಗಳು)**

ಬಜೆಟ್ ಹಂಚಿಕೆಯಲ್ಲಿ ಗಮನಾರ್ಹ ಏರಿಕೆಯಲ್ಲಿ ಸರ್ಕಾರದ ಬದ್ಧತೆಯು ಪ್ರತಿಫಲಿಸುತ್ತದೆ. ೨೦೧೩-೧೪ರಲ್ಲಿ ಕೇವಲ ೨೭ ಸಾವಿರ ಕೋಟಿ ರೂಪಾಯಿಗಳಿಂದ ಇಂದು ೧ ಲಕ್ಷ ೩೭ ಸಾವಿರ ಕೋಟಿ ರೂಪಾಯಿಗೂ ಹೆಚ್ಚಾಗಿದೆ. ಪಿಎಂ-ಕಿಸಾನ್ ಮೂಲಕ, ೧೧ ಕೋಟಿಗೂ ಹೆಚ್ಚು ರೈತರು ನೇರ ಆದಾಯ ಬೆಂಬಲವನ್ನು ಪಡೆದಿದ್ದಾರೆ.

<><><><>

ಜಿಎಸ್‌ಟಿ ಕಡಿತದ ಪ್ರಯೋಜನಗಳನ್ನು ಗ್ರಾಹಕರಿಗೆ ನೇರವಾಗಿ ವರ್ಗಾಯಿಸುವ ಪ್ರಯತ್ನದಲ್ಲಿ, ರೈಲ್ವೆ ಸಚಿವಾಲಯವು ರೈಲುಗಳು ಮತ್ತು ರೈಲ್ವೆ ಆವರಣಗಳಲ್ಲಿ ಲಭ್ಯವಿರುವ ಪ್ಯಾಕೇಜ್ ಮಾಡಿದ ಕುಡಿಯುವ ನೀರಿನ ಮುಖಬೆಲೆಯನ್ನು ಕಡಿತಗೊಳಿಸುವುದಾಗಿ ಘೋಷಿಸಿದೆ.

<><><><>

ಇದೇ ೨೨ರಿಂದ ಜಾರಿಗೆ ಬರುವ ಪರಿಷ್ಕೃತ ಜಿಎಸ್‌ಟಿ ದರಗಳು ಮತ್ತು ವಿನಾಯಿತಿಗಳ ಅನುಷ್ಠಾನದ ನಂತರ ನಿರೀಕ್ಷಿತ ಗ್ರಾಹಕರ ಪ್ರಶ್ನೆಗಳು ಮತ್ತು ದೂರುಗಳನ್ನು ಪರಿಹರಿಸಲು ಸಮಗ್ರ ಕುಂದುಕೊರತೆ ಪರಿಹಾರ ಕಾರ್ಯವಿಧಾನ-ಇನ್ ಗ್ರಾಮ್ ಪೋರ್ಟಲ್ ಸಕ್ರಿಯಗೊಳಿಸಲಾಗಿದೆ ಎಂದು ಗ್ರಾಹಕ ವ್ಯವಹಾರಗಳು, ಆಹಾರ

ಮತ್ತು ಸಾರ್ವಜನಿಕ ವಿತರಣಾ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಗ್ರಾಹಕರು ಈಗ ಟೋಲ್-ಫ್ರೀ ಸಂಖ್ಯೆ ೧-೯-೧-೫ ಮೂಲಕ ಅಥವಾ ಐಎನ್‌ಜಿಆರ್‌ಎಂ ಪೋರ್ಟಲ್ ಮೂಲಕ ಹದಿನೇಳು ಭಾಷೆಗಳಲ್ಲಿ ತಮ್ಮ ದೂರುಗಳನ್ನು ಸಲ್ಲಿಸಬಹುದು ಎಂದು ಸಚಿವಾಲಯ ತಿಳಿಸಿದೆ.

<><><><>

ಚೀನಾ ಮಾಸ್ಟರ್ಸ್ ೨೦೨೫ ಬ್ಯಾಡ್ಮಿಂಟನ್‌ನಲ್ಲಿ, ಭಾರತದ ಜೋಡಿ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಪುರುಷರ ಡಬಲ್ಸ್ ಫೈನಲ್‌ಗೆ ಲಗ್ಗೆ ಇಟ್ಟಿದ್ದಾರೆ. ಇಂದು ಸಂಜೆ ಶೆನ್ಜೆನ್ ಅರೆನಾದಲ್ಲಿ ನಡೆದ ಸೆಮಿಫೈನಲ್ ಹಣಾಹಣಿಯಲ್ಲಿ ಭಾರತೀಯ ಜೋಡಿ ಮಲೇಷ್ಯಾದ ಆರನ್ ಚಿಯಾ ಮತ್ತು ಸೋಹ್ ವೂಯಿ ಯಿಕ್ ಅವರನ್ನು ೨೧-೧೭, ೨೧-೧೪ ಅಂತರದಿಂದ ಸೋಲಿಸಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಪ್ರಸಾರ ಮುಕ್ತಾಯವಾಯಿತು <><>